ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 10 ನೇ ಮಾರ್ಚ್, 2020

ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಸ್ಮಾರ್ಟ್‌ಸಿಟಿ ಯೋಜನೆಗಳ ಕುರಿತು

ಶ್ರೀ ಐವನ್ ಡಿ' ಸೋಜಾ(ನಾಮನಿರ್ದೇಶನ ಹೊಂದಿದವರು):-

502 (593) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ರೈಲ್ವೆ ಇಲಾಖೆಯ ಮಹಾಕಾಳಿಪಡ್ಡುನಲ್ಲಿರುವ ಕೆಳಸೇತುವೆ/ಮೇಲುಸೇತುವೆ ರಚನೆಗೆ ಸ್ಮಾರ್ಟ್ ಸಿಟಿಯಿಂದ ಹಣವನ್ನು ಮೀಸಲಿಡಲಾಗಿದೆಯೇ; ಈ ಯೋಜನೆಯ ಕಾಮಗಾರಿ ಕೈಗೊಳ್ಳದಿರಲು ಕಾರಣಗಳೇನು; ಯಾವಾಗ ಕಾಮಗಾರಿ ಪ್ರಾರಂಭಿಸಲಾಗುವುದು; (ವಿವರ ನೀಡುವುದು)

(ಆ) ಮಹಾನಗರ ಪಾಲಿಕೆ ವ್ಯಾಪ್ತಿಯ ಒಳಗೆ ಇರುವ ಯಾವ ರೈಲ್ವೆ ಕಾಮಗಾರಿಗಳಿಗೆ ನಗರಪಾಲಿಕೆ ಅನುದಾನ ಒದಗಿಸಲಾಗಿದೆ; ನಗರಪಾಲಿಕೆ ವ್ಯಾಪ್ತಿಯಲಿ ರೈಲ್ವೆ ಕಾಮಗಾರಿಗಳು ನಿಧಾನಗತಿಯಲ್ಲಿ ಸಾಗಲು ಕಾರಣಗಳೇನು; (ವಿವರ ನೀಡುವುದು)

(ಇ) ಮಹಾಕಾಳಿಪಡ್ಡು ರೈಲ್ವೆ ಕ್ರಾಸ್‌ನಿಂದ ಸಾವಿರಾರು ಜನರಿಗೆ ತೊಂದರೆಯಾಗುತ್ತಿದ್ದು, ಈ ಕಾಮಗಾರಿಯನ್ನು ಆದ್ಯತೆಯ ಮೇಲೆ ಸರ್ಕಾರ ಕೈಗೆತ್ತಿಕೊಳ್ಳುವುದೇ?